## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 16/02/2020

# ಡಿಸಿಎಂ ಸವದಿ ಹಾದಿ ಸರಾಗ

ಉದಯ 16/2/20

ಬೆಂಗಳೂರು: ವಿಧಾನಪರಿಷತ್ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ಅನಿಲ್ ಕುಮಾರ್ ಕಣದಿಂದ ಹಿಂದೆ ಸರಿದಿದ್ದು, ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಹಾದಿ ಸರಾಗವಾಗಿದೆ. ಕಾಂಗ್ರೆಸ್ ಬೆಂಬಲ ಸಿಗದ ಹಿನ್ನೆಲೆಯಲ್ಲಿ ಅವರು ಈ ನಿರ್ಧಾರ ತೆಗೆದುಕೊಂಡಿದ್ದಾರೆ. ಫೆ.17ರಂದು ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್‌ನ ಒಂದು ಸ್ಥಾನಕ್ಕೆ ಚುನಾವಣೆ ನಿಗದಿಯಾಗಿತ್ತು. ಅನಿಲ್ ಕುಮಾರ್ ನಾಮಪತ್ರ ವಾಪಸ್‌ನಿಂದಾಗಿ ಸವದಿ ಅವರ ಆಯ್ಕೆ ಖಚಿತವಾಗಿದೆ.

ಮೂಲತಃ ಕಾಂಗ್ರೆಸ್ ಮುಖಂಡರಾಗಿರುವ ಅನಿಲ್‌ಕುಮಾರ್ ಜೆಡಿಎಸ್‌ನ ಹತ್ತು ಶಾಸಕರ ಸಹಿ ಪಡೆದು ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರು. ಆದರೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್ ಜತೆ ಚರ್ಚಿಸದೆ ಅಭ್ಯರ್ಥಿ ಕಣಕ್ಕಿಳಿಸಲಾಗಿದೆ ಎಂಬ ಕಾರಣಕ್ಕೆ ಹೈಕಮಾಂಡ್ ಬೆಂಬಲ ನೀಡುವ ಬಗ್ಗೆ ಆಶ್ವಾಸನೆ ನೀಡಲಿಲ್ಲ ಎಂದು ಹೇಳಲಾಗಿದೆ.